# 4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು-ಮಧುಗಿರಿ

**ಎಸ್.ಸಿ.ಸಂಖ್ಯೆ:** 5037/2023 ಫ್ರಾಸಾ-13
ಚಾಸಾ-13

ದಿನಾಂಕಃ 20-12-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| **ಹೆಸರು** | ಸತೀಶ್ |
| **ತಂದೆಯ / ಗಂಡನ ಹೆಸರು** | ಹನುಮಂತರಾಯಪ್ಪ |
| **ವಯಸ್ಸು** | 41 |
| **ಉದ್ಯೋಗ** | ಚಾಲಕ |
| **ವಾಸಸ್ಥಳ** | ಪಲವಳ್ಳಿ |

**<u>ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-</u>**

ವಿ.ಸಿ. ಮುಖಾಂತರ ಹಾಜರುಪಡಿಸಿದ ಆರೋಪಿಯ ಪರಿಚಯ ಇರುವುದಿಲ್ಲ, ಮೃತ ಲಕ್ಷ್ಮಿಯ ಪರಿಚಯ ಇರುವುದಿಲ್ಲ. ನಾನು ರಾಜೀ ಪಂಚಾಯಿತಿ ಮಾಡಿರುವುದಿಲ್ಲ , ಆರೋಪಿ ಮತ್ತು ಲಕ್ಷ್ಮೀಗೆ ಯಾವುದೇ ಬುದ್ದಿವಾದ ಹೇಳಿರುವುದಿಲ್ಲ. ಲಕ್ಷೀ ಹೇಗೆ ತೀರಿಕೊಂಡಿರುತ್ತಾರೆಂದು ನನಗೆ ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿಸಲಾಯಿತು)**

**<u>ಪಾಟೀಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ-</u>**

ಆರೋಪಿ ರಾಮಾಂಜಿ ತನ್ನ ಹೆಂಡತಿ ಲಕ್ಷ್ಮೀ ಯಾರೋ ಜೊತೆ ಫೋನ್ ನಲಪ್ಲಿ ಯವಾಗಲೂ ಮಾತನಾಡುತ್ತಾರೆ. ಅವನ ಜೊತೆ ಸಂಬಂಧ ಇಟ್ಟುಕೊಂಡಿದ್ದಾಳೆಂದು ಅನುಮಾನಪಟ್ಟು ಜಗಳ ಮಾಡುತ್ತಿದ್ದ. ನಾನು ಹೊಂದಾಣಿಕೆ ಮಾಡಿಕೊಂಡು ಹೋಗುವಂತೆ ಬುದ್ದಿವಾದ ಹೇಳಿದೇನು ಎಂದರೆ ಸರಿಯಲ್ಲ.

ದಿ. 15.08.2023 ರಂದು ರಾತ್ರಿ 10-45 ಗಂಟೆಗೆ ಆರೋಪಿ ತನ್ನ ಹೆಂಡತಿ ಲಕ್ಷ್ಮೀ ಮೇಲೆ ಅನುಮಾನ ಪಟ್ಟು ಒಣಕೆಯಿಂದ ತಲೆಗೆ ಹೊಡೆದು ಕೊಲೆ ಮಾಡಿರುತ್ತಾನೆಂದು ನನಗೆ ಗೊತ್ತಾಯಿತು ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ನಾನು ಪೊಲೀಸರ ಮುಂದೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-17 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲು . ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ</u>**

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**